**ಕರ್ನಾಟಕ ಸರ್ಕಾರ**

ಸಂ: ಎಫ್.ಡಿ 4 ಟಿಎಫ್‌ಪಿ 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ:17/11/2020

**ಸೇರ್ಪಡೆ ಆದೇಶ**

**ವಿಷಯ**:-2020-21ನೇ ಸಾಲಿನಲ್ಲಿ ಪಿಂಚಣಿ ಮತ್ತು ಸಾಮಾಜಿಕ ಭದ್ರತಾ ಪಿಂಚಣಿಗೆ ಸಂಬಂಧಿಸಿದ ಅನುದಾನಗಳನ್ನು ಬಿಡುಗಡೆ ಮಾಡಲು ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸುವ ಬಗ್ಗೆ.

**ಉಲ್ಲೇಖ**:-1) ಸರ್ಕಾರದ ಆದೇಶ ಸಂ:ಎಫ್.ಡಿ 4 ಟಿಎಫ್.ಪಿ. 2020, ದಿ:27.10.2020.
2) ಸರ್ಕಾರದ ಆದೇಶ ಸಂ:ಎಫ್.ಡಿ 4 ಟಿಎಫ್.ಪಿ. 2020, ದಿ:04.11.2020.

**********

ಈಗಾಗಲೇ ಉಲ್ಲೇಖಿತ ಆದೇಶಗಳಲ್ಲಿ ವೇತನ ಮತ್ತಿತರ ವೇತನ ಸಂಬಂಧಿತ ವೆಚ್ಚಗಳಾದ ದಿನಗೂಲಿ ವೇತನ, ಹೊರಗುತ್ತಿಗೆ ವೇತನ, ಸಹಾಯಾನುದಾನ-ವೇತನ ಇತ್ಯಾದಿಗಳಿಗೆ ಸಂಬಂಧಿಸಿದಂತೆ ಮಾರ್ಚ್ 2021 ರವರೆಗಿನ ಬಾಕಿ ಅನುದಾನಗಳನ್ನು ಬಿಡುಗಡೆ ಮಾಡಲು ಆಡಳಿತ ಇಲಾಖೆ ಕಾರ್ಯದರ್ಶಿಗಳಿಗೆ ಅಧಿಕಾರ ಪ್ರತ್ಯಾಯೋಜಿಸಿದೆ.

ಈಗ ಪಿಂಚಣಿ ಹಾಗೂ ಸಾಮಾಜಿಕ ಭದ್ರತಾ ಪಿಂಚಣಿಗೆ ಸಂಬಂಧಿಸಿದಂತೆ ವಿಳಂಬವಿಲ್ಲದೆ ಅನುದಾನ ಸೆಳೆಯಲು ಅನುವಾಗುವಂತೆ ಸರ್ಕಾರದ ಆದೇಶ ಸಂಖ್ಯೆ:ಆಇ 4 ಟಿಎಫ್‌ಪಿ 2020 ದಿನಾಂಕ:04.11.2020 ಕಂಡಿಕೆ-2 ರಲ್ಲಿ **"ಪಿಂಚಣಿ ಮತ್ತು ಸಾಮಾಜಿಕ ಭದ್ರತಾ ಪಿಂಚಣಿಗಳ ಲೆಕ್ಕ ಶೀರ್ಷಿಕೆಗಳಲ್ಲಿ 2020-21 ನೇ ಸಾಲಿಗೆ ಒದಗಿಸಿರುವ ಅನುದಾನದಲ್ಲಿ ಬಾಕಿ ಇರುವ ಅನುದಾನವನ್ನು ಬಿಡುಗಡೆ ಮಾಡಲು ಆಡಳಿತ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಿದೆ"** ಎಂದು ಸೇರ್ಪಡಿಸಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
17.11.2020
**(ಹೆಚ್.ಎ. ಶೋಭ)**
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ.
(ಆರ್ಥಿಕ ನಿಯಮಗಳು, ಆಯವ್ಯಯ
ಸಂಕಲನ ಮತ್ತು ಸಮಿತಿ ಶಾಖೆ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, ಲೆಕ್ಕಪತ್ರಗಳು ಮತ್ತು ಹಕ್ಕುಗಳು ಕರ್ನಾಟಕ, ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369, ಬೆಂಗಳೂರು.

2. ಪ್ರಧಾನ ಮಹಾಲೇಖಪಾಲರು (ಜಿಎಸ್‌ಎಸ್‌ಎ), ರೆಸಿಡೆನ್ಸಿ ರಸ್ತೆ, ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ.ಆರ್.ಎಸ್.ಎ), ರೆಸಿಡೆನ್ಸಿ ರಸ್ತೆ, ಕರ್ನಾಟಕ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ.
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
8. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
9. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು, ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು.
11. ಆರ್ಥಿಕ ಇಲಾಖೆಯ ಎಲ್ಲಾ ಶಾಖೆಗಳಿಗೆ.
12. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಬೆಂಗಳೂರು.
13. ಹೆಚ್ಚುವರಿ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ಬೆಂಗಳೂರು.
14. ಬಿಡಿ ಪ್ರತಿ / ಶಾ.ರ.ಕ.